ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 213 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ: 23.02.2018

## ಸುತ್ತೋಲೆ

ವಿಷಯ: ಪ್ರಧಾನ ಮಂತ್ರಿ ಆವಾಜ್ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ರವರ ಅ.ಸ.ಪತ್ರ ಸಂಖ್ಯೆ: ಸಿಎಸ್ 612 2018, ದಿನಾಂಕ 06.02.2018

2) ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ ರವರ ಅ.ಸ.ಪತ್ರ ಸಂಖ್ಯೆ: 11060/15/2017-ಆರ್‌ಹೆಚ್(ಎ/ಸಿ), ದಿನಾಂಕ 02.02.2018

***

ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಕಾರ್ಯದರ್ಶಿಗಳು ಪ್ರಧಾನ ಮಂತ್ರಿ ಆವಾಜ್ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ಬಗ್ಗೆ ಉಲ್ಲೇಖ (2) ರಲ್ಲಿ ಮುಖ್ಯ ಕಾರ್ಯದರ್ಶಿಗಳ ಗಮನ ಸೆಳೆದಿರುತ್ತಾರೆ. ಗ್ರಾಮೀಣಾ ಪ್ರದೇಶದ ಬಡತನ ರೇಖೆಗಿಂತ ಕೆಳಗಿನ ನಿವಾಸಿಗಳಿಗೆ ವಸತಿ ಸೌಕರ್ಯ ಕಲ್ಪಿಸಲು ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಪ್ರಧಾನ ಮಂತ್ರಿ ಆವಾಜ್ ಯೋಜನೆ(ಗ್ರಾಮೀಣ) ಯೋಜನೆಯು ವಸತಿ ಸೌಕರ್ಯ ಕಲ್ಪಿಸುವಲ್ಲಿ ಮಹತ್ವದ ಯೋಜನೆಯಾಗಿದೆ. 2017-18 ನೇ ಸಾಲಿಗೆ ಈ ಯೋಜನೆಯಡಿ ರಾಜ್ಯಕ್ಕೆ 1,00,000 ಮನೆಗಳು ಮಂಜೂರಾಗಿದ್ದು, ಜನವರಿ ಅಂತ್ಯಕ್ಕೆ ಕೇವಲ 19,770 ಮನೆಗಳು ಪೂರ್ಣಗೊಂಡಿದ್ದು, ಕೇವಲ ಶೇ.19.77 ರಷ್ಟು ಮಾತ್ರ ಗುರಿ ಸಾಧಿಸಿದಂತಾಗಿದೆ. ಆದುದರಿಂದ ಈ ಯೋಜನೆ ಯೋಜನೆಯನ್ನು ಪರಿಣಾಮಕಾರಿಯನ್ನಾಗಿ ಬಳಸಿಕೊಳ್ಳಲು ಗ್ರಾಮೀಣ ಭಾಗದ ಜನರಿಗೆ ಮೂಲ ಸೌಕರ್ಯವಾದ ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಲು ಹೆಚ್ಚಿನ ಆಸಕ್ತಿ ವಹಿಸಿ ಕಾರ್ಯೋನ್ಮುಖರಾಗುವಂತೆ ಕೋರಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3 ರಡಿ ವಸತಿ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡುವುದು ಗ್ರಾಮ ಪಂಚಾಯತಿಗಳ ಕರ್ತವ್ಯವಾಗಿರುತ್ತದೆ. ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ಗ್ರಾಮ ಪಂಚಾಯತಿಗಳಿಗೆ ಹಂಚಿಕೆಯಾಗಿರುವ ಮನೆಗಳಿಗೆ ಕಾಲಮಿತಿಯೊಳಗೆ ನಿಯಮಾನುಸಾರ ಗ್ರಾಮಸಭೆ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲು, ಆಯ್ಕೆಯಾದ ಫಲಾನುಭವಿಗಳಿಗೆ ಯೋಜನೆಯ ಮಾರ್ಗಸೂಚಿಗಳನುಸಾರ ಮನೆ ನಿರ್ಮಿಸಿಕೊಳ್ಳಲು ಅಗತ್ಯವಿರುವ ದಾಖಲೆಗಳನ್ನು ಸಂಗ್ರಹಿಸಿ ತ್ವರಿತವಾಗಿ ಮನೆ ನಿರ್ಮಾಣ ಮಾಡಿಕೊಳ್ಳಲು ಸೂಕ್ತ ನೆರವು ನೀಡಲು ಹಾಗೂ ನಿರ್ಮಾಣ ಹಂತದಲ್ಲಿ ಕಾಲಕಾಲಕ್ಕೆ ಫಲಾನುಭವಿಗಳಿಗೆ ಅನುದಾನ ದೊರೆಯುವಂತೆ ತಂತ್ರಾಂಶದಲ್ಲಿ ಮನೆ ನಿಮಾಣದ ವಿವಿಧ ಹಂತದ ಜಿಪಿಎಸ್ ಛಾಯಾಚಿತ್ರಗಳನ್ನು ಅಳವಡಿಸಿ ಹೆಚ್ಚಿನ ಪ್ರಮಾಣದಲ್ಲಿ ಯೋಜನೆಯ ಪ್ರಯೋಜನವನ್ನು ಫಲಾನುಭವಿಗಳು ಪಡೆದುಕೊಳ್ಳುವಂತೆ ಸಕಾಲಿಕ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದೆ.

23/2/18

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
3) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
4) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5) ಹೆಚ್ಚುವರಿ ಪ್ರತಿ.

ಪ್ರತಿ:

1) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ ರವರ ಆಪ್ತ ಕಾರ್ಯದರ್ಶಿ.